# ಯೋಹಾನನು
## ಬರೆದ ಎರಡನೆ ಪತ್ರ

1ಸಭಾಹಿರಿಯನು, ದೇವರಿಂದ ಆಯ್ಕೆಯಾದ ಅಮ್ಮ
ನವರಿಗೆ ಮತ್ತು ಆಕೆಯ ಮಕ್ಕಳಿಗೆ ಬರೆಯುವ ಪತ್ರ.
ನಾನು ನಿಮ್ಮೆಲ್ಲರನ್ನು ಸತ್ಯದಲ್ಲಿ ಪ್ರೀತಿಸುತ್ತೇನೆ.
ಸತ್ಯವನ್ನು ತಿಳಿದಿರುವ ಜನರೆಲ್ಲರೂ ಸಹ ನಿಮ್ಮನ್ನು
ಪ್ರೀತಿಸುತ್ತಾರೆ. 2ನಮ್ಮಲ್ಲಿ ನೆಲೆಗೊಂಡಿರುವ ಸತ್ಯದ
ನಿಮಿತ್ತ ನಾವು ನಿಮ್ಮನ್ನು ಪ್ರೀತಿಸುತ್ತೇವೆ. ಈ ಸತ್ಯವು
ನಮ್ಮಲ್ಲಿ ಸದಾಕಾಲ ಇರುವುದು.

3ತಂದೆಯಾದ ದೇವರಿಂದಲೂ ಆತನ ಮಗನಾದ
ಯೇಸು ಕ್ರಿಸ್ತನಿಂದಲೂ ಕೃಪೆ, ಕರುಣೆ ಮತ್ತು ಶಾಂತಿ
ನಮ್ಮೊಂದಿಗಿರುತ್ತವೆ. ನಾವು ಈ ಆಶೀರ್ವಾದಗಳನ್ನು
ಸತ್ಯದ ಮತ್ತು ಪ್ರೀತಿಯ ಮೂಲಕ ಪಡೆಯುತ್ತೇವೆ.

4ನಿಮ್ಮ ಮಕ್ಕಳಲ್ಲಿ ಕೆಲವರ ಬಗ್ಗೆ ನಾನು ಕೇಳಿದಾಗ
ತುಂಬಾ ಸಂತೋಷವಾಯಿತು. ತಂದೆಯಾದ ದೇವರು
ನಮಗೆ ಆಜ್ಞಾಪಿಸಿದ ಸತ್ಯಮಾರ್ಗವನ್ನು ಅವರು ಅನು
ಸರಿಸುತ್ತಿರುವುದರಿಂದ ನನಗೆ ಸಂತೋಷವಾಯಿತು.
5ಪ್ರಿಯ ಅಮ್ಮನವರೇ, ಈಗ ನಾನು ನಿಮ್ಮನ್ನು ಕೇಳಿ
ಕೊಳ್ಳುವುದೇನೆಂದರೆ, ನಾವು ಒಬ್ಬರನ್ನೊಬ್ಬರು ಪ್ರೀತಿಸ
ಬೇಕು. ಇದು ಹೊಸ ಆಜ್ಞೆಯಾಗಿರದೆ ಮೊದಲಿನಿಂದಲೂ
ಇದ್ದ ಆಜ್ಞೆಯಾಗಿದೆ. 6ಆತನು ಆಜ್ಞಾಪಿಸಿದ ಮಾರ್ಗ
ದಲ್ಲಿ ಜೀವಿಸುವುದೇ ಪ್ರೀತಿ. ನೀವು ಪ್ರೀತಿಯಿಂದ ಬಾಳ
ಬೇಕೆಂಬುದೇ ದೇವರ ಆಜ್ಞೆ. ನೀವು ಆರಂಭದಿಂದಲೂ ಈ
ಆಜ್ಞೆಯನ್ನು ಕೇಳಿರುವಿರಿ.

7ಈಗ ಲೋಕದಲ್ಲಿ ಅನೇಕ ಸುಳ್ಳುಬೋಧಕರಿದ್ದಾರೆ.
ಯೇಸು ಕ್ರಿಸ್ತನು ಈ ಲೋಕಕ್ಕೆ ಮನುಷ್ಯನಾಗಿ ಬಂದ
ನೆಂಬುದನ್ನು ಈ ಸುಳ್ಳುಬೋಧಕರು ಒಪ್ಪಿಕೊಳ್ಳುವು
ದಿಲ್ಲ. ಈ ಸತ್ಯವನ್ನು ಒಪ್ಪಿಕೊಳ್ಳದವನು ಸುಳ್ಳುಬೋಧಕ
ನಾಗಿದ್ದಾನೆ ಮತ್ತು ಯೇಸು ಕ್ರಿಸ್ತನ ವೈರಿಯಾಗಿದ್ದಾನೆ.
8ನೀವು ಎಚ್ಚರವಾಗಿರಿ! ನೀವು ದುಡಿದು ಸಂಪಾದಿಸಿದ್ದನ್ನು
ಕಳೆದುಕೊಳ್ಳಬೇಡಿ. ನೀವು ಎಚ್ಚರಿಕೆಯಿಂದ ಇರುವು
ದಾದರೆ, ನಿಮಗೆ ಬರಬೇಕಾದ ಪೂರ್ಣಫಲವನ್ನು ಹೊಂದಿ
ಕೊಳ್ಳುವಿರಿ.

9ಕ್ರಿಸ್ತನ ಉಪದೇಶದಲ್ಲಿ ನೆಲೆಗೊಳ್ಳದೆ ಅದನ್ನು
ಅತಿಕ್ರಮಿಸಿ ಮುಂದಕ್ಕೆ ಹೋಗುವವನು ದೇವರನ್ನು
ಹೊಂದಿಲ್ಲ. ಆದರೆ ಆ ಉಪದೇಶದಲ್ಲಿ ನೆಲೆಗೊಂಡಿರು
ವವನು ತಂದೆಯನ್ನೂ ಮಗನನ್ನೂ ಹೊಂದಿದ್ದಾನೆ.
10ನಿಮ್ಮ ಬಳಿಗೆ ಬರುವವನು ಈ ಉಪದೇಶವನ್ನು
ಹೊಂದಿಲ್ಲದಿದ್ದರೆ ಅವನನ್ನು ನಿಮ್ಮ ಮನೆಯೊಳಗೆ ಸೇರಿಸಿ
ಕೊಳ್ಳಬೇಡಿ. ಅವನನ್ನು ಸ್ವಾಗತಿಸಬೇಡಿ. 11ನೀವು
ಅವನನ್ನು ಸ್ವಾಗತಿಸಿದರೆ ಅವನ ಕೆಟ್ಟಕಾರ್ಯಕ್ಕೆ ನೀವೂ
ಸಹಾಯ ಮಾಡಿದಂತಾಗುವುದು.

12ನಾನು ನಿಮಗೆ ಹೇಳಬೇಕಾದುದು ಬಹಳಷ್ಟಿದೆ.
ಆದರೆ ನಾನು ಕಾಗದವನ್ನೂ ಇಂಕನ್ನೂ ಬಳಸ
ಲಿಚ್ಛಿಸುವುದಿಲ್ಲ. ಅದರ ಬದಲು, ನಾನೇ ನಿಮ್ಮ ಬಳಿಗೆ
ಬರಬೇಕೆಂದಿದ್ದೇನೆ. ಆಗ ನಾವು ಒಟ್ಟಾಗಿ ಮಾತನಾಡ
ಬಹುದು. ಇದು ನಮಗೆ ಬಹಳ ಸಂತಸವನ್ನು ಉಂಟು
ಮಾಡುತ್ತದೆ. 13ದೇವರಿಂದ ಆಯ್ಕೆಗೊಂಡವಳಾದ
ನಿಮ್ಮ ಸಹೋದರಿಯ ಮಕ್ಕಳು ನಿಮಗೆ ವಂದನೆ
ತಿಳಿಸಿದ್ದಾರೆ.